ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅಂತರ್ ಜಾತಿ ವಿವಾಹಗಳ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

642(635) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂತರ್ ಜಾತಿಯ ವಿವಾಹಗಳಿಗೆ ಪ್ರೋತ್ಸಾಹ ನೀಡಲು ಸರಕಾರ ಯಾವ ಯೋಜನೆಗಳನ್ನು ಜಾರಿಗೆ ತಂದಿದೆ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹೆಣ್ಣು ಮಕ್ಕಳನ್ನು ಇತರ ಜಾತಿಯವರು ವಿವಾಹವಾದರೆ ಸರಕಾರದಿಂದ ಯಾವ ಯಾವ ಸೌಲಭ್ಯಗಳು ದೊರೆಯುತ್ತವೆ;

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗಂಡು ಮಕ್ಕಳು ಇತರ ಜಾತಿಯ ಹೆಣ್ಣುಮಕ್ಕಳನ್ನು ವಿವಾಹವಾದರೆ ಸರಕಾರದಿಂದ ಯಾವ ಸೌಲಭ್ಯಗಳು ದೊರೆಯುತ್ತವೆ?